**File No.DPAR/105/RTI/2020-RTI-DPAR JANASPANDANASEC**

# ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 105 ಆರ್ ಟಿಐ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ),
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಮುಖ್ಯ ಗೋಪುರ,
ಬೆಂಗಳೂರು, ದಿನಾಂಕ: 06-06-2020.

## ಸುತ್ತೋಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ 2005ರ ಸೆಕ್ಷನ್ 4(1)(ಎ) ಮತ್ತು 4(1)(ಬಿ)ಗಳನ್ವಯ ಮಾಹಿತಿಯನ್ನು ತಯಾರಿಸಿ ವೆಬ್‌ಸೈಟ್ ನಲ್ಲಿ ಪ್ರಕಟಪಡಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ಮಾಹಿತಿ ಆಯೋಗದ ಆದೇಶ ಸಂಖ್ಯೆ: ಕೆಐಸಿ 12560 ಎಪಿಎಲ್ 2019 ದಿನಾಂಕ: 19-02-2020.

***

ಕರ್ನಾಟಕ ಮಾಹಿತಿ ಆಯೋಗವು ತನ್ನ ಮುಂದೆ ದಾಖಲಾಗಿದ್ದ ಪ್ರಕರಣ ಸಂಖ್ಯೆ: ಕೆಐಸಿ 12560 ಎಪಿಎಲ್ 2019ಗೆ ಸಂಬಂಧಿಸಿದಂತೆ ದಿನಾಂಕ: 19-02-2020ರಂದು ನೀಡಿದ ಆದೇಶದಲ್ಲಿ ಈ ಕೆಳಕಂಡಂತೆ ಸೂಚನೆ ನೀಡಿರುತ್ತದೆ:

> **"ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ 4(1)(ಎ) ಮತ್ತು 4(1)(ಬಿ)ರ ಪ್ರಕಾರ ಪ್ರಾಧಿಕಾರಗಳ ವಿವರಗಳನ್ನು ಕಡ್ಡಾಯವಾಗಿ ವೆಬ್ ಸೈಟ್ ಗಳಲ್ಲಿ ಪ್ರಕಟಿಸುವುದು ಮಾತ್ರವಲ್ಲದೆ ಅದನ್ನು ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಸೂಚನಾ ಫಲಕಗಳಲ್ಲೂ ಸಹ ಪ್ರಕಟಿಸಲು ಸೂಕ್ತ ಕ್ರಮ ಕೈಗೊಳ್ಳಲು ಆಯೋಗವು ಶಿಫಾರಸ್ಸು ಮಾಡುತ್ತದೆ. ಆದ್ದರಿಂದ ಇದರ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಮಾಹಿತಿ ದೊರಕುವಂತೆ ಮಾಡಬೇಕಾಗಿರುವುದು ಎಲ್ಲಾ ಸಾರ್ವಜನಿಕ ಪ್ರಾಧಿಕಾರಿಗಳ ಆದ್ಯ ಕರ್ತವ್ಯವಾಗಿರುವುದರಿಂದ ಈ ನಿಟ್ಟಿನಲ್ಲಿ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನವನ್ನು ನೀಡುವಂತೆ ಸೂಚಿಸಿದೆ."**

ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 4(1)(ಎ)ರಡಿ ಕಛೇರಿ ಕಡತಗಳನ್ನು/ದಾಖಲೆಗಳನ್ನು ವಿಷಯಸೂಚಿಯೊಂದಿಗೆ ಗಣಕೀಕರಣಗೊಳಿಸಿ ಪ್ರಕಟಪಡಿಸುವುದು ಮತ್ತು ಪ್ರಕರಣ 4(1)(ಬಿ)ರಡಿ ಇಲಾಖೆಗೆ ಸಂಬಂಧಿಸಿದ 17 ಅಂಶಗಳ ಮಾಹಿತಿಯನ್ನು ತಯಾರಿಸಿ ವೆಬ್‌ಸೈಟ್ ನಲ್ಲಿ ಪ್ರಕಟ ಪಡಿಸುವುದು ಮತ್ತು ಮಾಹಿತಿಯನ್ನು ಕಾಲಕಾಲಕ್ಕೆ ಅಪ್‌ಡೇಟ್ ಮಾಡುವುದು ಕಡ್ಡಾಯವಾಗಿದೆ.

2...

ಮಾಹಿತಿ ಹಕ್ಕು ಅಧಿನಿಯಮ, 2005ರ ಪ್ರಕರಣ 4(1)(ಎ) ಮತ್ತು ಪ್ರಕರಣ 4(1)(ಬಿ)ರಡಿ ಪ್ರಕಟಿಸುವ ಎಲ್ಲಾ ವಿವರಗಳನ್ನು ಪ್ರಕರಣ 4(2)ರನ್ವಯ ಸ್ವಯಂಪ್ರೇರಿತವಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಸೂಚನಾ ಫಲಕಗಳಲ್ಲೂ ಸಹ ಪ್ರಕಟಿಸುವುದು ಕಡ್ಡಾಯವಾಗಿರುತ್ತದೆ.

ಮಾಹಿತಿ ಹಕ್ಕು ಅಧಿನಿಯಮ 2005ರಡಿ ಸ್ವಯಂಪ್ರೇರಿತವಾಗಿ ಮಾಹಿತಿಯನ್ನು ಪ್ರಕಟಪಡಿಸುವ ಉದ್ದೇಶವು ಸಾರ್ವಜನಿಕರಿಗೆ ಸಾಧ್ಯವಾದಷ್ಟು ಮಾಹಿತಿಯು ಲಭ್ಯವಾಗುವಂತೆ ಮಾಡುವುದು ಹಾಗೂ ಸಾರ್ವಜನಿಕರು ವೈಯಕ್ತಿಕವಾಗಿ ಮಾಹಿತಿ ಕೋರಿಕೆ ಅರ್ಜಿಗಳ ಸಲ್ಲಿಸುವಿಕೆಯನ್ನು ಕಡಿಮೆ ಮಾಡುವುದಾಗಿದೆ. ಆದ್ದರಿಂದ ಮಾಹಿತಿ ಹಕ್ಕು ಅಧಿನಿಯಮ, 2005ರ ಪ್ರಕರಣ 4(1)(ಎ) ಮತ್ತು ಪ್ರಕರಣ 4(1)(ಬಿ)ರಡಿ ಸಚಿವಾಲಯದ ಎಲ್ಲಾ ಇಲಾಖೆಗಳು ಸಂಬಂಧಿಸಿದ ಮಾಹಿತಿಯನ್ನು ಸ್ವಯಂಪ್ರೇರಿತವಾಗಿ ಪ್ರಕಟಿಸಲು ಕ್ರಮಕೈಗೊಳ್ಳುವಂತೆ ಮತ್ತು ಅವುಗಳ ಆಡಳಿತಾಧೀನದಲ್ಲಿ ಬರುವ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳಿಗೆ ಅದೇ ರೀತಿ ಕ್ರಮವಹಿಸುವಂತೆ ಸೂಚಿಸಲು ಕೋರಲಾಗಿದೆ.

(ಪರಮೇಶ್ ಪಾಂಡೆ)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಜನಸ್ಪಂದನ)
06/06/2020

ಇವರಿಗೆ:

ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.

ಪ್ರತಿ:- ಮಾಹಿತಿಗಾಗಿ

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಜನಸ್ಪಂದನ), ವಿ.ವಿ.ಗೋಪುರ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.